ಕರ್ನಾಟಕ ಸರ್ಕಾರ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಆಯುಕ್ತರವರ ಕಛೇರಿ, ಗ್ರಾ.ಕು.ನೀ.& ನೈ. ಇಲಾಖೆ, 2ನೇ ಮಹಡಿ, "ಇ" ಬ್ಲಾಕ್, ಕೆ.ಹೆಚ್.ಬಿ. ಕಟ್ಟಡ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009 ದೂ.ಸಂ.: 080-22533700, e-mail: **krwssd@gmail.com**


ಸ.ಪ.ಸಂಖ್ಯೆ: ಗ್ರಾಅಪ/44/ಗ್ರಾನೀಸ(8)/2017 ದಿನಾಂಕ:21.08.2018

ಇವರಿಗೆ:

**1.** ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

**2.** ರಾಜ್ಯದ ಎಲ್ಲಾ (176) ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು

ಮಾನ್ಯರೇ,

ವಿಷಯ: ರಾಜ್ಯದಲ್ಲಿನ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ **188 ನೀರು ಶುದ್ಧೀಕರಣ ಘಟಕಗಳನ್ನು** ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಅಳವಡಿಸುವ ಬಗ್ಗೆ

ಉಲ್ಲೇಖ: 1.ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/03/ಗ್ರಾನೀಸ(8)/2015(ಭಾಗ-2), ದಿನಾಂಕ:16.09.2016

2.ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಇವರ ಪತ್ರ ಸಂಖ್ಯೆ: ಹೆಚ್.ಎಸ್.ಪಿ.(4)/31/2016-17, ದಿನಾಂಕ:24.11.2017

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ **ರಾಜ್ಯದಲ್ಲಿನ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ 188 ನೀರು ಶುದ್ಧೀಕರಣ ಘಟಕಗಳನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ** ಅಳವಡಿಸಲು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಶೇ.50ರಷ್ಟು ಅನುದಾನದಲ್ಲಿ ಮತ್ತು ಆರೋಗ್ಯ ಇಲಾಖೆಯಿಂದ ಶೇ.50ರಷ್ಟು ಅನುದಾನದಲ್ಲಿ ವೆಚ್ಚ ಭರಿಸಲು ಅನುಮೋದನೆ ನೀಡಲಾಗಿತ್ತು. ಜೊತೆಗೆ, ಸದರಿ 188 ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ತಗಲಬಹುದಾದ ಶೇ.50%ರಷ್ಟು ಅನುದಾನವನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳು ಮತ್ತು ತಾಲ್ಲೂಕು ಪಂಚಾಯತಿಗಳು ಅವರ ಅಧೀನದಲ್ಲಿ ಲಭ್ಯವಿರುವ ಅನುದಾನದಲ್ಲಿ ನಿಯಾಮಾನುಸಾರ ವೆಚ್ಚ ಭರಿಸಲು ಕ್ರಮವಹಿಸಲು ಸೂಚಿಸಲಾಗಿತ್ತು.

ಈ ಹಿನ್ನೆಲೆಯಲ್ಲಿ, ರಾಜ್ಯದಲ್ಲಿನ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ **188 ನೀರು ಶುದ್ಧೀಕರಣ ಘಟಕಗಳನ್ನು** ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಅಳವಡಿಸಲು ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳು ಮತ್ತು ತಾಲ್ಲೂಕು ಪಂಚಾಯತಿಗಳು ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿನ ಮಾರ್ಗಸೂಚಿಗಳನ್ವಯ ಕ್ರಮವಹಿಸಲು ಕೋರಿದೆ.

ತಮ್ಮ ವಿಶ್ವಾಸಿ,

(ಆಯುಕ್ತರು, ಗ್ರಾ.ಕು.ನೀ.&ನೈ.ಇಲಾಖೆರವರಿಂದ ಟಿಪ್ಪಣಿ ಅನುಮೋದಿಸಲ್ಪಟ್ಟಿದೆ)

ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು:

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-09
2. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09ರವರ ಮಾಹಿತಿಗಾಗಿ
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ(ಕೆ.ಆರ್.ಐ.ಡಿ.ಎಲ್.ಸಂಸ್ಥೆ), ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ, ಬೆಂಗಳೂರು-09. ಇವರ ಮಾಹಿತಿಗಾಗಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ